# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1508 |
| ಸದಸ್ಯರ ಹೆಸರು | : | ಶ್ರೀ ಪ್ರಕಾಶ್ ಕೆ. ರಾಥೋಡ್ |
| ಉತ್ತರಿಸುವ ದಿನಾಂಕ | : | 24-09-2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಸಮಾಜ ಕಲ್ಯಾಣ ಇಲಾಖೆಯ ವತಿಯಿಂದ ಪ್ರಸ್ತುತ ಸಾಲಿನಲ್ಲಿ ಶಾಲಾ ಕಟ್ಟಡ ನಿರ್ವಹಣೆ, ವಸತಿನಿಲಯ, ವಸತಿ ಶಾಲಾ ಕಟ್ಟಡಗಳನ್ನು ನಿರ್ಮಿಸಿ, ವಿದ್ಯಾರ್ಥಿಗಳ ಶಿಷ್ಯವೇತನ, ಎನ್.ಸಿ.ಎಂ.ಪಿ ಯೋಜನೆ ಇವುಗಳಿಗೆ ನೀಡಿರುವ ಹಣ ಎಷ್ಟು; | 2021-22ನೇ ಸಾಲಿನಲ್ಲಿ ಪರಿಶಿಷ್ಟ ಜಾತಿಯ ಸರ್ಕಾರಿ ವಿದ್ಯಾರ್ಥಿ ನಿಲಯ/ ವಸತಿ ಶಾಲೆಗಳ ಕಟ್ಟಡ ನಿರ್ಮಾಣಕ್ಕಾಗಿ ರಾಜ್ಯ ಆಯವ್ಯಯದಲ್ಲಿ ರೂ.180.00 ಕೋಟಿಗಳನ್ನು ಒದಗಿಸಿಕೊಳ್ಳಲಾಗಿರುತ್ತದೆ. ಸದರಿ ಕಾರ್ಯಕ್ರಮಕ್ಕೆ ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆಯಾಗಿರುವುದಿಲ್ಲ. ರೂ.180.00 ಕೋಟಿಗಳ ಪೈಕಿ ಇದುವರೆವಿಗೂ ಬಿಡುಗಡೆ ಮಾಡಿರುವ ರೂ.45.00 ಕೋಟಿಗಳನ್ನು ಈ ಹಿಂದಿನ ಆರ್ಥಿಕ ವರ್ಷಗಳಲ್ಲಿ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವತಿಯಿಂದ ಕೈಗೊಳ್ಳಲಾಗುತ್ತಿರುವ ಪರಿಶಿಷ್ಟ ಜಾತಿಯ ಸರ್ಕಾರಿ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕಾಗಿ ಬಾಕಿ ಅನುದಾನದ ರೂಪದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.<br><br>ಪ್ರಸ್ತುತ 2021-22ನೇ ಸಾಲಿನಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ನಿಗದಿಯಾದ ಅನುದಾನದ ವಿವರ<br><br>1. ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ರೂ. 11312.62 ಲಕ್ಷಗಳು<br>2. ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ರೂ. 35147.00 ಲಕ್ಷಗಳು |
| (ಆ) | ಸದರಿ ಯೋಜನೆಗೆ ರಾಜ್ಯ ಸರ್ಕಾರ ಹಾಗೂ ಕೇಂದ್ರ ಸರ್ಕಾರದಿಂದ ಬಿಡುಗಡೆಯಾದ ಹಣ ಎಷ್ಟು; | 2021-22ನೇ ಸಾಲಿನಲ್ಲಿ ಆಗಸ್ಟ್-2021ರ ಅಂತ್ಯಕ್ಕೆ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ಬಿಡುಗಡೆಯಾದ ಅನುದಾನದ ವಿವರ<br><br>1. **ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ:-**<br><br>ರಾಜ್ಯ ಸರ್ಕಾರದಿಂದ ಬಿಡಗಡೆಯಾದ ಒಟ್ಟು ಅನುದಾನ:- **ರೂ. 5656.31 ಲಕ್ಷಗಳು**<br><br>ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಯಾಗಿರುವುದಿಲ್ಲ.<br><br>2. **ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ:-**<br><br>ರಾಜ್ಯ ಸರ್ಕಾರದಿಂದ ಬಿಡಗಡೆಯಾದ ಒಟ್ಟು ಅನುದಾನ:- **ರೂ.11500.00 ಲಕ್ಷಗಳು**<br><br>ಕೇಂದ್ರ ಸರ್ಕಾರದಿಂದ ಅನುದಾನ ಬಿಡುಗಡೆ ಯಾಗಿರುವುದಿಲ್ಲ. |

| | | |
|---|---|---|
| (ಇ) | ಯಾವ ಅನುಪಾತದಲ್ಲಿ ರಾಜ್ಯ ಸರ್ಕಾರ ಹಣ ಬಿಡುಗಡೆ ಮಾಡಲಾಗಿದೆ; | ಕೇಂದ್ರ ಪುರಸ್ಕೃತ ಯೋಜನೆಗಳಾದ ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ (9 ಮತ್ತು 10ನೇ ತರಗತಿ) ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿವೇತನಕ್ಕೆ ರಾಜ್ಯ ಸರ್ಕಾರವು ಈ ಕೆಳಕಂಡ ಅನುಪಾತದಲ್ಲಿ ಹಣ ಬಿಡುಗಡೆ ಮಾಡಲಾಗುತ್ತದೆ.<br><br>ಕೇಂದ್ರ ಸರ್ಕಾರದ ಪಾಲು – ಶೇ. 60<br>ರಾಜ್ಯದ ಸರ್ಕಾರದ ಪಾಲು –ಶೇ. 40 |
| (ಈ) | ಈ ಎಲ್ಲಾ ಯೋಜನೆಗಳ ಪ್ರಸ್ತುತ ಸಾಧನೆಗಳೇನು? (ವಿವರ ಒದಗಿಸುವುದು) | ಮೆಟ್ರಿಕ್ ಪೂರ್ವ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ರಾಜ್ಯ ವಿದ್ಯಾರ್ಥಿವೇತನ ಪೋರ್ಟಲ್ ತಂತ್ರಾಂಶಕ್ಕೆ ಶಿಕ್ಷಣ ಇಲಾಖೆಯ SATS ದತ್ತಾಂಶಕ್ಕೆ ಅಳವಡಿಸಲಾಗಿದ್ದು, SATS ದತ್ತಾಂಶಕ್ಕೆ ಅನುಗುಣವಾಗಿ ವಿದ್ಯಾರ್ಥಿಯ ವಿವರಗಳು ನವೀಕರಣಗೊಳ್ಳುವ ವ್ಯವಸ್ಥೆ ಮಾಡಲಾಗಿದೆ. ಅದರಂತೆ, ನವೀಕರಣ ವಿದ್ಯಾರ್ಥಿಗಳಿಗೆ 2021-22ನೇ ಸಾಲಿನಲ್ಲಿ ಮಂಜೂರಾತಿ ಪ್ರಕ್ರಿಯೆ ಜಾರಿಯಲ್ಲಿದೆ. ಹೊಸ ವಿದ್ಯಾರ್ಥಿಗಳಿಗೆ ಮಾತ್ರ ಆನ್‌ಲೈನ್ ಮೂಲಕ ನೊಂದಣಿ ಪ್ರಕ್ರಿಯೆ ಜಾರಿಯಲ್ಲಿದೆ.<br><br>2021-22ನೇ ಸಾಲಿನ ಮೆಟ್ರಿಕ್ ನಂತರದ ವಿದ್ಯಾರ್ಥಿವೇತನ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ರಾಜ್ಯ ವಿದ್ಯಾರ್ಥಿವೇತನ ತಂತ್ರಾಂಶದಲ್ಲಿ (ಎಸ್.ಎಸ್.ಪಿ.) ಅರ್ಜಿ ಆಹ್ವಾನಿಸಲಾಗಿದ್ದು, ಈವರೆವಿಗೆ 19134 ಅರ್ಜಿಗಳು ತಂತ್ರಾಂಶದಲ್ಲಿ ಸ್ವೀಕೃತವಾಗಿದ್ದು, ಅರ್ಜಿ ಸಲ್ಲಿಸುವ ಪ್ರಕ್ರಿಯೆ ಜಾರಿಯಲ್ಲಿದೆ. |

ಸಕಇ 344 ಪಕವಿ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು.